# 1 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು.

**ಓ ಎಸ್ ನಂ.42-2013** **ಪಿ . ಡಬ್ಲುಃ 1**

| | |
|---|---|
| ಸಾಕ್ಷಿದಾರರ ಹೆಸರು<br>ವಾಸ್ತವ್ಯ | ಉಮೇಶ<br>ಅಳಗಂಚಿ , ನಂಜನಗೂಡು ತಾ |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 21-09-2024.** |

**ಮುಂದುವರೆದ ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಕೆ.ಎಸ್.ಎಂ ರವರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿದ್ದು ಅದನ್ನು ನಾನೇ ಹೇಳಿ ಬರೆಯಿಸಿ ಸಹಿ ಮಾಡಿರುತ್ತೇನೆ.

ಸ.ನಂ. 71/2 ರ ಹದ್ದುಬಸ್ತು ಬಾಬ್ತು ಮಾಡಿರುವ ಮಹಜರ್ ನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-17 ಎಂದು, ಫೋಟೊಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-18 ರಿಂದ 39 ಎಂದು, ಸಿ.ಡಿ ಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-40 ಎಂದು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಕಾರ್ಪೋರೇಶನ್ ನಿಯಮಿತ ರವರು ನೀಡಿರುವ ರಶೀದಿಯನ್ನು ಹಾಜರುಪಡಿಸಿದ್ದು ನಿಪಿ-41 ಎಂದು, resurvey ನಂಬರ್ 71/2 ರ ಅಟ್ಲಾಸ್ ನ ದೃಡಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-42 ಎಂದು, ಗ್ರಾಮ ಲೇಕ್ಕಾಧಿಕಾರಿಯವರು ನೀಡಿರುವ ಜಮೀನು ಮತ್ತು ನೀರು ಹಕ್ಕುಗಾರಿಗೆ ದೃಡಿಕೃತ ನಕಲುಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿ-43 ಎಂದು, ನೊಂದಣಿ ಸರಳ ಅಡಮಾನ ಪತ್ರದ Digitalized ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-44 ಎಂದು, ಎಸ್.ವಿ.ಟಿ ಬೋರ್ವೆಲ್ ಸರ್ವಿಸ್ ರವರು ನೀಡಿರುವ

ದೃಢೀಕರಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ–45 ಎಂದು, ಭೂವಿಜ್ಞಾನಿ ರವರು ನೀಡಿರುವ ಸರ್ವೆ ತನಿಖಾ ವರದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ–46 ಮತ್ತು 47 ಎಂದು, ಭೂವಿಜ್ಞಾನಿ ರವರು ನೀಡಿರುವ ದೃಢೀಕರಣ ಪತ್ರವನ್ನು ಹಾಜರುಪಡಿಸಿದ್ದು ನಿಪಿ–48 ಎಂದು, ಹಪಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ನಿಪಿ–49 ರಿಂದ 51 ಎಂದು, ಹಿಸ್ಸಾ ಸರ್ವೆ ಪಕ್ಕಾ ಪುಸ್ತಕದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ–52 ಎಂದು, ಗ್ರಾಮಲೇಕ್ಕಾಧಿಕಾರಿಯವರು ನೀಡಿರುವ ಚೆಕ್ಕುಬಂದಿ ದೃಢಿಕರಣ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ–53 ಎಂದು ಗುರುತಿಸಲಾಯಿತು.

(ಮುಂದುವರಿದ ಮುಖ್ಯ ವಿಚಾರಣೆಗೆ ವಕೀಲರು ಸಮಯಾವಕಾಶವನ್ನು ಕೇಳಿರುವುದರಿಂದ ಸಮಯಾವಕಾಶವನ್ನು ನೀಡಲಾಯಿತು)

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/–**

**C/C 1 ನೇ ಪ್ರ.ದ. ನ್ಯಾ ದಂ. ನಂಜನಗೂಡು**